# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 620(739) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 18.08.2025 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಸ್ಥಾಪಿತವಾಗಿರುವ ನೃಪತುಂಗ ವಿಶ್ವವಿದ್ಯಾಲಯದಲ್ಲಿ ನಿಗದಿತ ಸಮಯದಲ್ಲಿ ಶೈಕ್ಷಣಿಕ ಮಂಡಳಿ ಸಭೆ (Academic Council Meeting) ಹಮ್ಮಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಏನು ಕ್ರಮ ಕೈಗೊಂಡಿದೆ; | ನೃಪತುಂಗ ವಿಶ್ವವಿದ್ಯಾಲಯ ಏಕೀಕೃತ ವಿಶ್ವವಿದ್ಯಾಲಯವಾಗಿದ್ದು ಯಾವುದೇ affiliated ಕಾಲೇಜುಗಳನ್ನು ಹೊಂದಿರುವುದಿಲ್ಲವಾದ್ದರಿಂದ ಇತರೆ ವಿಶ್ವವಿದ್ಯಾಲಯಲ್ಲಿರುವಂತೆ, ಹೆಚ್ಚಿನ ವಿಚಾರಗಳು ಅನುಮೋದನೆಗೆ ಇಲ್ಲದಿರುವುದರಿಂದ ಹೆಚ್ಚಿನ ಸಂಖ್ಯೆಯ Academic Council Meeting ಸಭೆಗಳನ್ನು ನಡೆಸಲಾಗಿರುವುದಿಲ್ಲ. |
| (ಆ) | ಸದರಿ ವಿಶ್ವವಿದ್ಯಾಲಯವು ಆಯ್ಕೆಯಾದ ಸದಸ್ಯರುಗಳಿಗೆ ಸಭೆಗಳಲ್ಲಿ ವಿಶ್ವವಿದ್ಯಾಲಯದ ಕುರಿತು ಸರಿಯಾದ ಮಾಹಿತಿ ನೀಡದೇ ಚುನಾಯಿತ ಜನಪ್ರತಿನಿಧಿಗಳಿಗೆ ಅಗೌರವ ತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿಶ್ವವಿದ್ಯಾಲಯವು ನೀಡಿರುವ ಮಾಹಿತಿಯಂತೆ ನೃಪತುಂಗ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಮಂಡಳಿಗೆ ಆಯ್ಕೆಯಾದ ಸದಸ್ಯರುಗಳಿಗೆ ಸಭೆಗಳಲ್ಲಿ ಯಾವುದೇ ರೀತಿಯಾದ ಅಗೌರವವನ್ನು ತೋರಿರುವುದಿಲ್ಲ, ಅಂತಹ ಘಟನೆಗಳು ಯಾವುದು ನಡೆದಿರುವುದಿಲ್ಲ. ಸದಸ್ಯರುಗಳು ಅಪೇಕ್ಷಿಸಿದ ಮಾಹಿತಿಯನ್ನು ಕಾಲಕಾಲಕ್ಕೆ ಒದಗಿಸಲಾಗಿರುತ್ತದೆ. |
| (ಇ) | ಒಂದು ಸರ್ಕಾರಿ ವಿಜ್ಞಾನ ಕಾಲೇಜುನ್ನು ಮೇಲ್ದರ್ಜೆಗೇರಿಸಿ ನೃಪತುಂಗ ವಿಶ್ವವಿದ್ಯಾಲಯವನ್ನಾಗಿ ಮಾಡಿರುವುದಕ್ಕೆ ಕಾರಣಗಳೇನು? | ಸರ್ಕಾರಿ ವಿಜ್ಞಾನ ಕಾಲೇಜು, ಬೆಂಗಳೂರು ತನ್ನ ಮೂರನೇ NAAC ಮರು ಮೌಲ್ಯಮಾಪನದಲ್ಲಿ ಅಂಕಗಳಿಗೆ, 3.54 ಅಂಕಗಳನ್ನು (CGPA) ಪಡೆದು ಸ್ವಾಯತ್ತ ಸ್ಥಾನಮಾನವನ್ನು ಹೊಂದಿರುತ್ತದೆ. ಈ ಹಿನ್ನಲೆಯಲ್ಲಿ ಇಲಾಖಾ ವತಿಯಿಂದ ರೂಸಾ ಯೋಜನೆಯಡಿ ಅರ್ಜಿ ಸಲ್ಲಿಸಲಾಗಿರುತ್ತದೆ. ಅಂತೆಯೇ ರೂಸಾ ಯೋಜನೆಯ 2.0 ಅಡಿಯಲ್ಲಿ ಸರ್ಕಾರಿ ವಿಜ್ಞಾನ ಕಾಲೇಜು ಏಕೀಕೃತ ವಿಶ್ವವಿದ್ಯಾಲಯವಾಗಿ ಉನ್ನತಿಕರಣಗೊಂಡಿರುತ್ತದೆ. |

| | | |
|---|---|---|
| (ಈ) | ಸದರಿ ವಿಶ್ವವಿದ್ಯಾಲಯವನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ವಿಲೀನಗೊಳಿಸಲು ಸರ್ಕಾರ ಯೋಚಿಸಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು? (ಮಾಹಿತಿ ನೀಡುವುದು) | ನೃಪತುಂಗ ವಿಶ್ವವಿದ್ಯಾಲಯವನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ವಿಲೀನಗೊಳಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿರುವುದಿಲ್ಲ. |

ಸಂಖ್ಯೆ: ಇಡಿ/381/ಯುಆರ್ ಸಿ /2025

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು